ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಅತಿವೃಷ್ಠಿಯಿಂದ ಉಂಟಾದ ಸಮಸ್ಯೆ ಹಾಗೂ ಪರಿಹಾರದ ಕುರಿತು

ಶ್ರೀಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

300 (371) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅತಿವೃಷ್ಠಿಯಿಂದಾಗಿ ನದಿಗಳು ಉಕ್ಕಿ ಹರಿದು, ರಸ್ತೆಗಳು, ಸೇತುವೆಗಳು, ಸಂಪರ್ಕ ರಸ್ತೆಗಳು ಹಾಳಾಗಿದ್ದು, ಇದರಿಂದ ಸಾರ್ವಜನಿಕರು ತಮ್ಮ ಸಂಪರ್ಕ ಮತ್ತು ಸಾಗಾಣಿಕೆಗಳಿಗಾಗಿ ಪರದಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಹಾಳಾಗಿರುವ ರಸ್ತೆಗಳು, ಸೇತುವೆಗಳು. ಸಂಪರ್ಕ ರಸ್ತೆಗಳನ್ನು ಮರು ನಿರ್ಮಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಸನ್ 2019ರ ಆಗಸ್ಟ್‌ನ ಪ್ರವಾಹ ಪೀಡಿತ ಪ್ರದೇಶಗಳ ಎಷ್ಟು ಉದ್ದದ ವಿವಿಧ ರಸ್ತೆಗಳು ಹಾಗೂ ಸೇತುವೆಗಳು ಹಾಳಾಗಿವೆ; (ವಿವರ ಒದಗಿಸುವುದು)

(ಈ) ಹಾಳಾಗಿದ್ದ ಎಷ್ಟು ಉದ್ದದ ರಸ್ತೆಗಳು, ಸಂಪರ್ಕ ರಸ್ತೆಗಳನ್ನು, ಸೇತುವೆಗಳನ್ನು ಮರು ನಿರ್ಮಾಣ ಮಾಡಲಾಗಿದೆ ; ಅವುಗಳು ಯಾವುವು ; (ವಿವರ ಒದಗಿಸುವುದು)

(ಉ) ಉಳಿದ ಹಾಳಾಗಿರುವ ರಸ್ತೆಗಳು, ಸಂಪರ್ಕ ರಸ್ತೆಗಳನ್ನು, ಸೇತುವೆಗಳ ಮರು ನಿರ್ಮಾಣವನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ಒದಗಿಸುವುದು)